ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 482 ಜಿಪಸ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:10-01-2019.

**ಇವರಿಂದ:**

**ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. **ಕಾರ್ಯದರ್ಶಿ,**
   ರಾಜ್ಯ ಚುನಾವಣಾ ಆಯೋಗ,
   ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ,
   ಕಟ್ಟಡ (ಹಿಂಭಾಗ), 1ನೇ ಮಹಡಿ, ನಂ-8,
   ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
2. **ಪ್ರಾದೇಶಿಕ ಆಯುಕ್ತರು,**
   ಬೆಂಗಳೂರು ವಿಭಾಗ ಮತ್ತು ಕಲಬುರಗಿ ವಿಭಾಗ,
3. **ಜಿಲ್ಲಾಧಿಕಾರಿ,**
   ದಾವಣಗೆರೆ ಮತ್ತು ಬಳ್ಳಾರಿ.
4. **ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,**
   ಜಿಲ್ಲಾ ಪಂಚಾಯತ್,
   ದಾವಣಗೆರೆ ಮತ್ತು ಬಳ್ಳಾರಿ.

**ಮಾನ್ಯರೆ,**

**ವಿಷಯ:** ದಾವಣಗೆರೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿದ್ದ ಹರಪನಹಳ್ಳಿ ತಾಲ್ಲೂಕ ಪಂಚಾಯಿತಿಯನ್ನು ಬಳ್ಳಾರಿ ಜಿಲ್ಲಾ ಪಂಚಾಯಿತಿಗೆ ಸೇರ್ಪಡೆಗೊಳಿಸುವ ಬಗ್ಗೆ.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಾವಣಗೆರೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿದ್ದ ಹರಪನಹಳ್ಳಿ ತಾಲ್ಲೂಕ ಪಂಚಾಯಿತಿಯನ್ನು ಬಳ್ಳಾರಿ ಜಿಲ್ಲಾ ಪಂಚಾಯಿತಿಗೆ ಸೇರ್ಪಡೆಗೊಳಿಸಿ, ಅಧಿಸೂಚನೆಯನ್ನು ಹೊರಡಿಸಿದೆ. ಸದರಿ ಅಧಿಸೂಚನೆಯನ್ನು ಸರ್ಕಾರವು, ಕರ್ನಾಟಕ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿದ್ದು, ಸದರಿ ಪ್ರತಿಯನ್ನು ನಿಯಮಾನುಸಾರ ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.

ತಮ್ಮ ವಿಶ್ವಾಸಿ,

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಯನ್ನು:

ಮುಖ್ಯಸ್ಥರು, ಗಣಕಕೋಶ, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಸದರಿ ಅಧಿಸೂಚನೆಯ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ-III<br>Part-III | ಬೆಂಗಳೂರು, ಶನಿವಾರ, ಜನವರಿ ೫, ೨೦೧೯ (ಪುಷ್ಯ ೧೫, ಶಕ ವರ್ಷ ೧೯೪೦)<br>Bengaluru, Saturday, January 5, 2019 (Pushya 15, Shaka Varsha 1940) | ನಂ. ೧೬<br>No.16 |
|---|---|---|

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವಾಲಯ

ವಿಷಯ: ದಾವಣಗೆರೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿದ್ದ ಹರಪನಹಳ್ಳಿ ತಾಲ್ಲೂಕ ಪಂಚಾಯಿತಿಯನ್ನು ಬಳ್ಳಾರಿ ಜಿಲ್ಲಾ ಪಂಚಾಯಿತಿಗೆ ಸೇರ್ಪಡೆಗೊಳಿಸುವ ಬಗ್ಗೆ.

ಅಧಿಸೂಚನೆ;

ಸಂಖ್ಯೆ: ಗ್ರಾಅಪ 482 ಜಿಪಸ 2018 ಬೆಂಗಳೂರು, ದಿನಾಂಕ:05-01-2019

ಸರ್ಕಾರವು, ಅಧಿಸೂಚನೆ ಸಂಖ್ಯೆ: ಆರ್‌ಡಿ 139 ಭೂದಮ 2013 ದಿನಾಂಕ:24-12-2018 ರಂದು ದಾವಣಗೆರೆ ಜಿಲ್ಲೆಯಲ್ಲಿದ್ದ ಹರಪನಹಳ್ಳಿ ತಾಲ್ಲೂಕನ್ನು ಬೇರ್ಪಡಿಸಿ ಬಳ್ಳಾರಿ ಜಿಲ್ಲೆಗೆ ಸೇರಿಸಿ ಅಧಿಸೂಚನೆಯನ್ನು ಹೊರಡಿಸಿದೆ. ಈ ಹಿನ್ನಲೆಯಲ್ಲಿ, ಪ್ರಸ್ತುತ ದಾವಣಗೆರೆ ಜಿಲ್ಲಾ ಪಂಚಾಯಿತಿಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಹರಪನಹಳ್ಳಿ ತಾಲ್ಲೂಕು ಪಂಚಾಯಿತಿಯನ್ನು ಸದರಿ ಜಿಲ್ಲಾ ಪಂಚಾಯಿತಿಯಿಂದ ಬೇರ್ಪಡಿಸಿ, ಬಳ್ಳಾರಿ ಜಿಲ್ಲಾ ಪಂಚಾಯಿತಿಯ ವ್ಯಾಪ್ತಿಗೆ ಸೇರಿಸಿದೆ. ಹರಪನಹಳ್ಳಿ ತಾಲ್ಲೂಕು ಪಂಚಾಯಿತಿಗೆ ಸಂಬಂಧಿಸಿದ ಎಲ್ಲಾ ಕಾರ್ಯ ವ್ಯವಹಾರಗಳನ್ನು ಇನ್ನು ಮುಂದೆ ಬಳ್ಳಾರಿ ಜಿಲ್ಲಾ ಪಂಚಾಯಿತಿನಿಂದ ವ್ಯವಹರಿಸುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 302 (ಬಿ) ರನ್ವಯ ಆದೇಶಿಸಿದೆ.

ಮುಂದುವರೆದು, ಹರಪನಹಳ್ಳಿ ತಾಲ್ಲೂಕು ಪಂಚಾಯತ್ ಸದಸ್ಯರು ಮತ್ತು ಹರಪನಹಳ್ಳಿ ತಾಲ್ಲೂಕು ಪಂಚಾಯತ್ ವ್ಯಾಪ್ತಿಗೆ ಒಳಪಡುವ ಜಿಲ್ಲಾ ಪಂಚಾಯತ್ ಕ್ಷೇತ್ರವನ್ನು ಪ್ರತಿನಿಧಿಸುವ ಈ ಕೆಳಕಂಡ ದಾವಣಗೆರೆ ಜಿಲ್ಲಾ ಪಂಚಾಯತ್ ಸದಸ್ಯರ ಸ್ಥಾನವು ಬಳ್ಳಾರಿ ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಒಳಪಡುತ್ತದೆ ಎಂದು ಆದೇಶಿಸಿದೆ.

| ಕ್ರ.ಸಂ. | ಸದಸ್ಯರ ಹೆಸರು | ಕ್ಷೇತ್ರ |
|---|---|---|
| 1 | ಶ್ರೀಮತಿ ಜಯಶೀಲ ಕೆ.ಆರ್. | ತೆಲಿಗಿ ಜಿ.ಪಂ.ಕ್ಷೇತ್ರ |
| 2 | ಶ್ರೀಮತಿ ರಶ್ಮಿ ಜಿ. | ಉಚ್ಚಂಗಿದುರ್ಗ ಜಿ.ಪಂ.ಕ್ಷೇತ್ರ |
| 3 | ಶ್ರೀಮತಿ ವೈ.ಸುಶೀಲಮ್ಮ ದೇವೇಂದ್ರಪ್ಪ. | ಅರಸೀಕೆರೆ ಜಿ.ಪಂ.ಕ್ಷೇತ್ರ |
| 4 | ಶ್ರೀ ಮಂಜುನಾಥ ಉತ್ತಂಗಿ. | ಚಿಗಟೇರಿ ಜಿ.ಪಂ.ಕ್ಷೇತ್ರ |
| 5 | ಶ್ರೀ ಹೆಚ್.ಬಿ.ಪರಶುರಾಮ್. | ನೀಲಗುಂದ ಜಿ.ಪಂ.ಕ್ಷೇತ್ರ |
| 6 | ಶ್ರೀ ಡಿ.ಸಿದ್ದಪ್ಪ | ಕಂಚಿಕೆರೆ ಜಿ.ಪಂ.ಕ್ಷೇತ್ರ |
| 7 | ಶ್ರೀಮತಿ ಆರುಂಡಿ ಸುವರ್ಣ ನಾಗರಾಜ್. | ಹಲವಾಗಲು ಜಿ.ಪಂ.ಕ್ಷೇತ್ರ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

**ವಿ. ವೆಂಕಟೇಶ್**
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 200